**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ:122:ಉಖಾಯೋ:08 ದಿ:04.10.2010

ಗೆ,

ಅಧ್ಯಕ್ಷರು
ಫರಹಾಬಾದ ಗ್ರಾಮಪಂಚಾಯಿತಿ,
ಗುಲ್ಬರ್ಗಾ ತಾಲ್ಲೂಕು ಮತ್ತು ಜಿಲ್ಲೆ.

ಮಾನ್ಯರೆ,

ವಿಷಯ: ಗುಲ್ಬರ್ಗಾ ಜಿಲ್ಲೆ ಮತ್ತು ಗುಲ್ಬರ್ಗಾ ತಾಲ್ಲೂಕಿನ ಫರಹಾಬಾದ ಗ್ರಾ.ಪಂ. ವ್ಯಾಪ್ತಿಯಲ್ಲಿ ಹೆಚ್ಚುವರಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ನಮೂದಿಸಿದ ಕಾಮಗಾರಿಗಳನ್ನು ಕೇಂದ್ರ ಸರ್ಕಾರದ ಅನುದಾನದಡಿಯಲ್ಲಿ ಕೈಗೊಳ್ಳುವ ಬಗ್ಗೆ ಮನವಿ ಸಲ್ಲಿಸುವ ಕುರಿತು.

ಉಲ್ಲೇಖ: ಮಾನ್ಯ ಗ್ರಾಮ ಪಂಚಾಯಿತಿ ಸಚಿವರಿಗೆ, ತಾವು ಸಲ್ಲಿಸಿದ ಮನವಿ ಪತ್ರದ ದಿ: 5.8.2010.

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ, ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಗುಲ್ಬರ್ಗಾ ಜಿಲ್ಲೆಯ ಗುಲ್ಬರ್ಗಾ ತಾಲ್ಲೂಕಿನ ಫರಹಾಬಾದ ಗ್ರಾಮ ಪಂಚಾಯಿತಿಯಲ್ಲಿ ಬರುವ ಕೆಲವು ಗ್ರಾಮಗಳಿಗೆ, ಕೂಡು ರಸ್ತೆಗಳ ನಿರ್ಮಾಣ, ರುದ್ರಭೂಮಿ, ಖಬರಸ್ಥಾನ ಮತ್ತು ಮಹಿಳಾ ಶೌಚಾಲಯಕ್ಕೆ ಕಾಂಪೌಂಡ್‌ವಾಲ್ ನಿರ್ಮಾಣ ಮಾಡುವ ಕಾಮಗಾರಿಗಳನ್ನು ಕೈಗೊಳ್ಳುವಂತೆ, ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಿ ಕೋರಿರುವ ವಿಷಯವನ್ನು ಪರಿಶೀಲಿಸಲಾಗಿದೆ. ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಮಾರ್ಗಸೂಚಿಗಳ ಪ್ರಕಾರ, ಕೂಡುರಸ್ತೆಗಳ ನಿರ್ಮಾಣದ ಕಾಮಗಾರಿಗಳು, ಕಡೆಯ ಆದ್ಯತಾ ವಲಯದ ಕಾಮಗಾರಿಗಳಗಿರುತ್ತವೆ. ಆದರೂ, ಸದರಿ ಕಾಮಗಾರಿಗಳನ್ನು ಗ್ರಾಮ ಪಂಚಾಯಿತಿಯಲ್ಲಿ ಕೈಗೊಳ್ಳುವ ಒಟ್ಟು ಕಾಮಗಾರಿಗಳ ಮೌಲ್ಯದ ಮೊತ್ತದಲ್ಲಿ, ಶೇಕಡಾ 10ರಷ್ಟಿನ ಮೌಲ್ಯದ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶವಿರುತ್ತದೆ ಮತ್ತು ಈ ಮಿತಿಯನ್ನು ಮೀರಿ ಕಾಮಗಾರಿಗಳನ್ನು ಕೈಗೊಳ್ಳುವಂತಿಲ್ಲ. ಸದರಿ ಮಿತಿಗೆ ಒಳ ಪಟ್ಟು ಕೂಡು ರಸ್ತೆ ನಿರ್ಮಾಣದ ಕಾಮಗಾರಿಗಳನ್ನು ಗ್ರಾಮ ಸಭೆಗಳಲ್ಲಿ ಮಂಡಿಸಿ ಅನುಮೋದಿಸಿಕೊಂಡು ಅನುಷ್ಠಾನಗೊಳಿಸಲು ಕ್ರಮವಹಿಸಬಹುದಾಗಿರುತ್ತದೆ.

ರುದ್ರಭೂಮಿ, ಖಬರಸ್ಥಾನ ಮತ್ತು ಮಹಿಳಾ ಶೌಚಾಲಯಕ್ಕೆ ಕಾಂಪೌಂಡ್‌ವಾಲ್‌ಗಳನ್ನು ನಿರ್ಮಾಣ ಮಾಡುವ ಕಾಮಗಾರಿಗಳನ್ನು ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೈಗೊಳ್ಳಲು ಅವಕಾಶವಿರುವುದಿಲ್ಲ. ಮೇಲೆನೀಡಿರುವ ಸೂಚನೆಗಳಂತೆ, ಕ್ರಮವಹಿಸಲು ತಿಳಿಸಿದೆ.

ಜಿಲ್ಲಾ ಪಂಚಾಯತ್ ಕಾರ್ಯಾಲಯ
ಉತ್ತರ ಕನ್ನಡ ಕಾರವಾರ
18 OCT 2010
ದಿನಾಂಕ: ವಿಷಯ
ಮುಕಾ

ತಮ್ಮ ವಿಶ್ವಾಸಿ

(ಎನ್.ಎಸ್. ಪ್ರಸನ್ನಕುಮಾರ್)
ನಿರ್ದೇಶಕರು
ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ,
ಹಾಗೂ ಪದ ನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ:
1. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಗುಲ್ಬರ್ಗಾ.
2. ಕಾರ್ಯ ನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯಿತಿ ಗುಲ್ಬರ್ಗಾ.
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.